## ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎನ್ ರವಿಕುಮಾರ್ ನಿಯಮ 330 ರಡಿ ಗಮನ ಸೆಳೆಯುವ ಸೂಚನೆ:

### ಸೂಚನೆ

ರಾಜ್ಯದ ಗ್ಯಾರಂಟಿ ಭಾಗ್ಯಗಳಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಅನುದಾನವನ್ನು ಬಳಸಿಕೊಳ್ಳುತ್ತಿರುವುದು ಸರ್ಕಾರಕ್ಕೆ ಸರಿ ಅನ್ನಿಸುತ್ತಿದೆಯೇ, ಈ ರೀತಿ ಇಲಾಖೆಗಳ ಅನುದಾನವನ್ನು ಬಳಸಿಕೊಳ್ಳುವುದರಿಂದ ಇಲಾಖೆಯ ಅಭಿವೃದ್ಧಿಗೆ ಹಿನ್ನಡೆಯುಂಟಾಗುವುದು ಸರ್ಕಾರದ ಗಮನದಲ್ಲಿದ್ದರೂ ರೂ.11.00 ಸಾವಿರ ಕೋಟಿ ಅನುದಾನವನ್ನು ಸರ್ಕಾರವು ಬಳಸಿಕೊಂಡಿರುವುದು ಎಷ್ಟರ ಮಟ್ಟಿಗೆ ಸರಿ ಅನ್ನಿಸುತ್ತಿದೆ. ಇದರಿಂದ ಸಂಬಂಧಪಟ್ಟ ಫಲಾನುಭವಿಗಳಿಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಅನ್ಯಾಯವಾಗುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುತ್ತಿದೆ. ಈ ವಿಷಯಕ್ಕೆ ಸಂಬಂಧಿಸಿದಂತೆ, ನಿಯಮ 330ರಡಿ ಮಾನ್ಯ ಸಮಾಜ ಕಲ್ಯಾಣ ಸಚಿವರ ಬಳಿ ಚರ್ಚಿಸಲು ಪ್ರಸ್ತಾಪಿಸ ಬಯಸುತ್ತೇನೆ.

### ಉತ್ತರ.

ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಧಿನಿಯಮ 2013 ಮತ್ತು ನಿಯಮಗಳು 2017ರಲ್ಲಿ ಪ.ಜಾತಿ/ ಪ.ಪಂಗಡದ ಜನರಿಗೆ ನೇರವಾಗಿ ಪ್ರಯೋಜನವಾಗುವ ಕಾರ್ಯಕ್ರಮಗಳಿಗೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ಹಂಚಿಕೆ ಮಾಡಿ ಅನುಷ್ಠಾನಗೊಳಿಸಲು ಅವಕಾಶವಿದೆ.

ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ಪ.ಜಾತಿ/ ಪ.ಪಂಗಡದವರ ಅಭಿವೃದ್ಧಿಗೆ ವಿನಿಯೋಗಿಸುತ್ತಿರುವ ಕಾರಣ ಅನ್ಯ ಉದ್ದೇಶಕ್ಕಾಗಿ ಅನುದಾನ ಬಳಸಿರುವುದಿಲ್ಲ. ಆದ್ದರಿಂದ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯ ಪ್ರಶ್ನೆ ಉದ್ಭವಿಸುವುದಿಲ್ಲ.

ಗ್ಯಾರಂಟಿ ಯೋಜನೆಗಳಡಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಒದಗಿಸಿರುವ ಅನುದಾನವನ್ನು ಪ.ಜಾತಿ/ ಪ.ಪಂಗಡದವರಿಗೆ ಉಪಯೋಗಿಸುತ್ತಿರುವ ಕಾರಣ ಇದರಿಂದ ಯಾವುದೇ ಅನ್ಯಾಯವಾಗುವುದಿಲ್ಲ.

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಹಿತದೃಷ್ಟಿಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ) ಯನ್ನು ಕೈಬಿಡಲು ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿದೆ. ಇದರ ಪರಿಣಾಮವಾಗಿ ಭಾರೀ ನೀರಾವರಿ, ಲೋಕೋಪಯೋಗಿ, ನಗರಾಭಿವೃದ್ಧಿ, ಸಣ್ಣ ನೀರಾವರಿ ಇತ್ಯಾದಿ ಇಲಾಖೆಗಳಿಗೆ ಕಾಮಗಾರಿಗಳಿಗಾಗಿ ಹಂಚಿಕೆ ಮಾಡುತ್ತಿದ್ದ ಅನುದಾನವನ್ನು ಕಡಿತಗೊಳಿಸಿ, ಫಲಾನುಭವಿ ಆಧಾರಿತ ಕಾರ್ಯಕ್ರಮಗಳಿಗೆ ಹೆಚ್ಚಿನ ಅನುದಾನವನ್ನು ಹಂಚಿಕೆ ಮಾಡಲಾಗಿದೆ.

ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆಯ ಸೆಕ್ಷನ್ 7 (ಡಿ) ಅನ್ನು ಬಜೆಟ್ ಘೋಷಣೆಯಂತೆ ಕೈಬಿಡಲು ಕಾಯ್ದೆಗೆ ತಿದ್ದುಪಡಿ ತರುವ ಬಗ್ಗೆ ಕ್ರಮ ವಹಿಸಲಾಗುತ್ತಿದೆ.

**ಸಕಇ 484 ಎಸ್‌ಎಲ್ ಪಿ 2023**

**(ಡಾ ಹೆಚ್.ಸಿ ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು